



ಅರುಣ ಪಿ. ಭಟ್ಟ

## ವಾರಭವಿಷ್ಯ: 02.05.2024ರಿಂದ 08.05.2024ರವರೆಗೆ




ನಿಮ್ಮ ಆತ್ಮವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ವೆಚ್ಚ ಏರಿದರೂ ಆದಾಯದಲ್ಲಿನ ಹೆಚ್ಚಳ ಖರ್ಚನ್ನು ಸರಿದೂಗಿಸುತ್ತದೆ. ನಿಮ್ಮ ಅಭಿಪ್ರಾಯಗಳನ್ನು ಇತರರ ಮೇಲೆ ಹೇರಬೇಡಿ. ನಿಮ್ಮ ಮನೆಯಲ್ಲಿ ಸಾಮರಸ್ಯ ತರಲು ಸಹಕಾರದೊಂದಿಗೆ ಕೆಲಸ ಮಾಡಬೇಕು. ನಿಮ್ಮ ಸ್ಪರ್ಧಾತ್ಮಕ ಸ್ವಭಾವ, ನೀವು ಸದಾ ಮುಂದಿರಲು ಸಹಾಯ ಮಾಡುತ್ತದೆ. ಶುಭದಿನ 04. ಶ್ರೀ ದುರ್ಗಾ ಆರಾಧನೆ ಮಾಡಿರಿ.




ವಾರದ ಶುರುವಿನಿಂದಲೇ ವೃತ್ತಿಪರ ಜೀವನದಲ್ಲಿ ಉತ್ತಮ ಅವಕಾಶಗಳು ದೊರೆಯಲಿವೆ. ಅದರ ಫಲಿತವಾಗಿ ಸರಿಯಾದ ಸಮಯಕ್ಕೆ ಕೆಲಸ–ಕಾರ್ಯಗಳು ಪೂರ್ಣಗೊಳ್ಳಲಿವೆ. ಮಕ್ಕಳಿಗೆ ಸಹಾಯ ಮಾಡಲಿದ್ದೀರಿ. ಕುಟುಂಬದಲ್ಲಿ ಹಲವು ಬದಲಾವಣೆ ತರುವ ಮೂಲಕ ಸಂತೋಷ ಉಂಟು ಮಾಡಲಿದ್ದೀರಿ. ಇಲ್ಲದಿದ್ದರೆ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಶುಭದಿನ 06. ಹನುಮಾನ್ ಚಾಲೀಸ್ ಓದಿರಿ.




ದಾನ ಧರ್ಮ ಕಾರ್ಯಗಳಲ್ಲಿ ಆಸಕ್ತಿ ಮೂಡುತ್ತದೆ. ಅದಕ್ಕೆ ನಿಮ್ಮ ಕುಟುಂಬದ ಬೆಂಬಲವೂ ದೊರೆಯುತ್ತದೆ. ಆದಾಯ ಮೂಲಗಳಿಂದ ಉತ್ತಮ ವರಮಾನ ಇರುತ್ತದೆ. ಇದರಿಂದ ನಿಮ್ಮ ಆತ್ಮವಿಶ್ವಾಸ ಹೆಚ್ಚಾಗುತ್ತದೆ, ಸಂತೋಷ ಕೂಡ ಉಂಟಾಗುತ್ತದೆ. ನಿಮ್ಮ ಜೀವನಶೈಲಿ ಮತ್ತಷ್ಟು ಉತ್ತಮಗೊಳ್ಳುತ್ತದೆ. ನಿಮ್ಮ ಇಷ್ಟದ ವಸ್ತುವೊಂದನ್ನು ಖರೀದಿ ಮಾಡುತ್ತೀರಿ. ಶುಭದಿನ 07. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ನಿಮ್ಮ ಸಾಮರ್ಥ್ಯವನ್ನು ಸರಿಯಾದ ದಿಕ್ಕಿನಲ್ಲಿ ಬಳಸಿಕೊಳ್ಳುತ್ತೀರಿ. ಇದರಿಂದ ಮುಂಬರುವ ದಿನಗಳಲ್ಲಿ ಅನುಕೂಲ ಆಗುತ್ತದೆ. ಆರೋಗ್ಯದಲ್ಲಿ ಏರುಪೇರಾಗುವ ಸಾಧ್ಯತೆಗಳಿವೆ. ಕುಟುಂಬದ ಸದಸ್ಯರ ಜೊತೆಗೆ ಉತ್ತಮ ಬಾಂಧವ್ಯ ಇರುತ್ತದೆ. ಸಹೋದರರ ಜೊತೆ ಮುಖ್ಯವಾದ ವಿಚಾರಗಳನ್ನು ಚರ್ಚೆ ಮಾಡುತ್ತೀರಿ. ಇದರಿಂದ ಅವರ ಪ್ರಗತಿಗೆ ಅನುಕೂಲ ಆಗುತ್ತದೆ. ಶುಭದಿನ 04. ವಿಷ್ಣು ಸಹಸ್ರನಾಮ ಓದಿರಿ.




ವಾರದ ಮೊದಲ ಭಾಗದಲ್ಲಿ ದೂರದ ಪ್ರದೇಶಗಳಿಗೆ ತೆರಳುವ ಸಂಭವ. ಭೂಮಿಗೆ ಸಂಬಂಧಿಸಿದ ವ್ಯಾಜ್ಯಗಳು ಕೋರ್ಟ್‌ನಲ್ಲಿ ಇದ್ದರೆ ಅವುಗಳನ್ನು ನಿವಾರಿಸಿಕೊಳ್ಳುವ ನಿಟ್ಟಿನಲ್ಲಿ ಹೆಚ್ಚು ಶ್ರಮ ಪಡಬೇಕಾಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಆಲೋಚನೆ ಮಾಡುತ್ತೀರಿ. ನಿಮ್ಮ ಆರೋಗ್ಯದಲ್ಲಿ ಸ್ವಲ್ಪ ಏರುಪೇರು ಆಗಬಹುದು. ಶುಭದಿನ 04. ಕಾಲಭೈರವನ ಸೇವೆ ಮಾಡಿರಿ.




ನಿಮ್ಮ ಸಂಬಂಧಿಕರ ಭೇಟಿ ಮಾಡುವ ಸಾಧ್ಯತೆ ಇದೆ. ಉದ್ಯೋಗದಲ್ಲಿ ಒತ್ತಡ ಹೆಚ್ಚಾಗುವ ಸಾಧ್ಯತೆಯಿದೆ. ಕುಟುಂಬದ ನಿರ್ಧಾರಕ್ಕೆ ಪೂರಕವಾಗಿ ಹಲವು ಅವಕಾಶಗಳು ದೊರೆಯಲಿವೆ. ಭೂಮಿ ಖರೀದಿಗೆ ಮನಸ್ಸು ಮಾಡುತ್ತೀರಿ. ವ್ಯವಹಾರದಲ್ಲಿ ಆತುರ ಮಾಡಿ ನಿಮ್ಮ ಹಣ ಇನ್ನೊಬ್ಬರ ಕೈಯಲ್ಲಿ ಸಿಲುಕಿಕೊಳ್ಳಬಹುದು. ಯೋಚಿಸಿ ನಿರ್ಣಯಿಸಿ. ಶುಭದಿನ 06. ದೇವ್ಯಪರಾಧ ಕ್ಷಮಾಪನಾ ಸ್ತೋತ್ರ ಪಠಣ ಮಾಡಿರಿ.




ವೃತ್ತಿಪರ ಜೀವನದಲ್ಲಿ ಉತ್ತಮವಾದ ಅವಕಾಶಗಳು ದೊರೆಯಲಿವೆ. ಕೌಟುಂಬಿಕ ವಿಷಯಗಳಲ್ಲಿ ಪ್ರಗತಿ ಕಾಣಲಿದೆ. ವ್ಯಾಪಾರದಲ್ಲಿ ಪ್ರಗತಿ ಕಾಣಿಸುತ್ತದೆ. ನಿಮ್ಮ ಆರೋಗ್ಯ ಕೂಡ ಉತ್ತಮವಾಗಿರುತ್ತದೆ. ಮಕ್ಕಳ ಪ್ರಗತಿ ನಿಧಾನ ಆಗುವುದರಿಂದ ಚಿಂತೆಗೆ ಕಾರಣವಾಗುತ್ತದೆ. ತಂತ್ರಜ್ಞಾನ ಕ್ಷೇತ್ರಕ್ಕೆ ಸಂಬಂಧಿಸಿದವರಿಗೆ ಉತ್ತಮವಾದ ಪ್ರಗತಿ ಕಾಣಲಿದೆ. ಶುಭದಿನ 05. ದಕ್ಷಿಣಾಮೂರ್ತಿ ಸ್ತೋತ್ರ ಪಠಣ ಮಾಡಿರಿ.




ಉದ್ಯೋಗಸ್ಥರು ನಿಮಗೆ ವಹಿಸಿದ ಕೆಲಸಗಳನ್ನು ಪೂರೈಸಲು ಯಶಸ್ವಿ ಆಗುತ್ತೀರಿ. ವ್ಯಾಪಾರದ ಪ್ರಗತಿ. ನಿಮ್ಮ ಸಿಬ್ಬಂದಿಯ ಆತ್ಮಸ್ಥೈರ್ಯ ಹೆಚ್ಚಿಸುವಲ್ಲಿ ಸಫಲರಾಗುತ್ತೀರಿ. ಪ್ರೋತ್ಸಾಹ ನೀಡುತ್ತೀರಿ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ನೀಡಿದ ಸಂದರ್ಶನಗಳು ಯಶಸ್ಸು ಕಾಣುವ ಸಾಧ್ಯತೆಗಳಿವೆ. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿಯ ಭಾವನೆಗಳಿಗೂ ಗೌರವ ನೀಡಿ. ಶುಭದಿನ 03. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಹಣಕಾಸು ಹೂಡಿಕೆಯಲ್ಲಿ ಪ್ರಗತಿ ಕಾಣಲಿದ್ದೀರಿ. ಬಾಹ್ಯ ಚಟುವಟಿಕೆಗಳು ಈ ಹಿಂದಿನಂತೆಯೇ ನಡೆಯುತ್ತವೆ. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿಯಿಂದ ಕೆಲ ಗೊಂದಲ, ಆತಂಕ ಸೃಷ್ಟಿ ಆಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಗ್ರಹ ಸ್ಥಿತಿಗಳು ನಿಮಗೆ ಅನುಕೂಲಕರವಾಗಿ ಪರಿಣಮಿಸುತ್ತದೆ. ಇದರಿಂದ ಮನಸಿಗೆ ಸಮಾಧಾನ ದೊರೆಯುತ್ತದೆ. ಶುಭದಿನ 04. ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.




ವಾರದ ಶುರುವಿನಿಂದಲೇ ನಿಮ್ಮ ಅದೃಷ್ಟ ಚೆನ್ನಾಗಿದೆ. ನಿಮ್ಮ ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ಹಿಂದೆಂದಿಗಿಂತಲೂ ಹೆಚ್ಚು ಚಟುವಟಿಕೆಯಿಂದ ಕಾಣಿಸಿಕೊಳ್ಳುತ್ತೀರಿ. ಕಟ್ಟಡ– ವಾಹನಗಳ ನಿರ್ವಹಣೆಯು ನಿರಂತರ ಚಿಂತೆಗೆ ಕಾರಣವಾಗುತ್ತದೆ. ತಂದೆಯ ಜೊತೆ ಮನಸ್ತಾಪ ಉದ್ಭವಿಸಬಹುದು. ಈ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಶುಭದಿನ 06. ಮಾರುತಿ ಗುಡಿಗೆ ಮುಖ ನೋಡಿದ ಎಣ್ಣೆ ನೀಡಿರಿ.




ವ್ಯಾಪಾರ ಮಾಡುತ್ತಿರುವವರು ಮುಂದಿನ ಹಂತಕ್ಕೆ ತೆಗೆದುಕೊಂಡು ಹೋಗಲು ಯತ್ನಿಸುತ್ತೀರಿ. ನಿಮ್ಮ ಶ್ರಮಕ್ಕೆ ಯಶಸ್ಸು ದೊರೆಯುತ್ತದೆ. ನಿಮ್ಮ ಆರೋಗ್ಯ ಚೆನ್ನಾಗಿರುತ್ತದೆ. ಮನಸಿಗೆ ಸಂತೋಷ ನೀಡುವಂಥ ಗೃಹಾಲಂಕಾರ ವಸ್ತುಗಳ ಖರೀದಿಗೆ ಮುಂದಾಗುತ್ತೀರಿ. ಪಿತ್ರಾರ್ಜಿತ ಆಸ್ತಿ ವಿಚಾರವಾಗಿ ಬಿಕ್ಕಟ್ಟು ಉದ್ಭವಿಸುವ ಸಾಧ್ಯತೆ ಇದೆ. ಶುಭದಿನ 07. ಸುಬ್ರಹ್ಮಣ್ಯ ಜಪ ಮಾಡಿರಿ.




ನಿಮ್ಮ ಕೆಲಸಗಳನ್ನು ಇನ್ನಷ್ಟು ಒಪ್ಪ–ಓರಣವಾಗಿ ಮಾಡಲು ಇನ್ನೂ ಹೆಚ್ಚಿನ ಶ್ರಮ ಹಾಕುತ್ತೀರಿ. ನಿಮ್ಮ ಮೇಲಧಿಕಾರಿಗಳು ಸೂಚನೆ ನೀಡಿ, ಕೆಲಸದ ವೇಗವನ್ನು ಮತ್ತಷ್ಟು ಹೆಚ್ಚಿಸಿಕೊಳ್ಳುವಂತೆ ಸೂಚನೆ ನೀಡುತ್ತಾರೆ. ಕೆಲವು ವ್ಯವಹಾರಗಳನ್ನು ಮಾಡುವಾಗ ಬಹಳ ಎಚ್ಚರಿಕೆಯಿಂದ ಇರಬೇಕಾಗುತ್ತದೆ. ಜತೆಗೆ ಸ್ವಚ್ಛತೆ ಕಡೆಗೆ ಹೆಚ್ಚಿನ ಗಮನ ನೀಡಬೇಕಾಗುತ್ತದೆ. ಶುಭದಿನ 06. ನವದುರ್ಗಾ ಆರಾಧನೆ ಮಾಡಿರಿ.